ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/253/ಪಿ,ಹೆಚ್.ಡಿ /ರದ್ದು/2022-23/ಸೇವಿ-1 ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿನಾಂಕ:08-12-2022.

## : ಸುತ್ತೋಲೆ :

**ವಿಷಯ:** ಪಿಹೆಚ್‌ಡಿ ಪದವಿಗೆ ಸಂಬಂಧಿಸಿದ ಮುಂಗಡ ವೇತನ ಬಡ್ತಿಗಳ ಬಗ್ಗೆ.

****

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹ/ಸಹಾಯಕ ಪ್ರಾಧ್ಯಾಪಕರು/ಗ್ರಂಥಪಾಲಕರು/ದೈಹಿಕ ಶಿಕ್ಷಣ ಬೋಧಕರುಗಳಲ್ಲಿ ಈಗಾಗಲೇ ಪಿಹೆಚ್‌ಡಿ ಪದವಿಗೆ ಮುಂಗಡ ವೇತನ ಬಡ್ತಿಗಳನ್ನು ಪಡೆದಿರುವ ಕೆಲವು ಬೋಧಕರು ಎ.ಜಿ.ಪಿ ಸ್ಥಾನೀಕರಣದಲ್ಲಿ ಸೇವಾ ವಿನಾಯಿತಿಯನ್ನು ಪಡೆಯುವ ಸಲುವಾಗಿ, ಅವರುಗಳು ಪಡೆದ ಪಿಹೆಚ್‌ಡಿ ಮುಂಗಡ ವೇತನ ಬಡ್ತಿಗಳನ್ನು ರದ್ದು ಪಡಿಸುವಂತೆ ಕೋರಿ ವಿವಿಧ ಕಾಲೇಜುಗಳಿಂದ ಸಲ್ಲಿಸಿರುವ ಮನವಿ/ಪ್ರಸ್ತಾವನೆಗಳು ಈ ಕಛೇರಿಯಲ್ಲಿ ಸ್ವೀಕೃತವಾಗುತ್ತಿವೆ. ಆಡಳಿತಾತ್ಮಕ ಹಿತದೃಷ್ಟಿಯಿಂದ ಈಗಾಗಲೇ ಪಡೆದಿರುವ ಪಿಹೆಚ್‌ಡಿ ಮುಂಗಡ ವೇತನ ಬಡ್ತಿಯ ಮಂಜೂರಾತಿಯನ್ನು ರದ್ದುಗೊಳಿಸಲು ಅವಕಾಶವಿರುವುದಿಲ್ಲವಾದ್ದರಿಂದ ಇಂತಹ ಪ್ರಸ್ತಾವನೆಗಳನ್ನು ಸಲ್ಲಿಸದಿರುವಂತೆ ತಿಳಿಸಲಾಗಿದೆ.

**(ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

08/12/2022
*ಮುಖ್ಯ ಆಡಳಿತಾಧಿಕಾರಿಗಳು*
*ಕಾಲೇಜು ಶಿಕ್ಷಣ ಇಲಾಖೆ.*

**ಇವರಿಗೆ:**

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಂಬಂಧದಲ್ಲಿ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:

1. ಮಾನ್ಯ ಆಯುಕ್ತರು/ನಿರ್ದೇಶಕರು/ಹೆಚ್ಚುವರಿ ನಿದೇಶಕರ ಆಪ್ತ ಶಾಖೆಗಳಿಗೆ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ ಬೆಂಗಳೂರು.
2. ಕಛೇರಿ ಪ್ರತಿ.

253. Dr Deepak K- Phd Cancellation